ಆ) ಬಡವರು ಮತ್ತು ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಕಡಿಮೆ ಅವಧಿಯ ತಾಂತ್ರಿಕ ಶಿಕ್ಷಣವನ್ನು ನೀಡುವ ದಿಶೆಯಲ್ಲಿ ಬೆಳ್ತಂಗಡಿಯಲ್ಲಿ ಪಾಲಿಟೆಕ್ನಿಕ್ ಪ್ರಾರಂಭಕ್ಕೆ ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ನೂತನ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸುವ ಹಂತದಲ್ಲಿ ಬೆಳ್ತಂಗಡಿ ತಾಲ್ಲೂಕಿಗೆ ಆದ್ಯತೆ ನೀಡಿ ಸರ್ಕಾರ ಅನುಕೂಲ ಮಾಡಿಕೊಡಲಾಗುವುದೇ?

ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) :

ಅ, ಆ, ಇ) ಆಯವ್ಯಯದಲ್ಲಿ ಲಭ್ಯತೆಯನ್ನು ಗಮನದಲ್ಲಿಟ್ಟುಕೊಂಡು ಮುಂಬರುವ ವರ್ಷಗಳಲ್ಲಿ ಬೆಳ್ತಂಗಡಿ ತಾಲ್ಲೂಕಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ನ್ನು ಪ್ರಾರಂಭಿಸಲು ಪರಿಶೀಲಿಸಲಾಗುವುದು.

576 (797) ಶ್ರೀ ರಮೇಶ್ ಕುಮಾರ್ ಕೆ.ಆರ್ (ಶ್ರೀನಿವಾಸಪುರ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ರಾಜ್ಯ ಸರ್ಕಾರ ಅನುಸರಿಸಿದ ನೀತಿಯಿಂದ ರಾಜ್ಯದ ಅನೇಕ ಬಡ ಮಕ್ಕಳಿಗೆ ವೈದ್ಯಕೀಯ ಮತ್ತು ಇಂಜಿನಿಯರಿಂಗ್ ಶಿಕ್ಷಣ ಮುಂದುವರೆಸಲು ವಂಚನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸಿ.ಇ.ಟಿ. ಕೌನ್ಸಿಲಿಂಗ್‌ಗೆ ಹಾಜರಾಗಬೇಕಾದ ಎಸ್.ಸಿ/ಎಸ್.ಟಿ. ವಿದ್ಯಾರ್ಥಿಗಳ ಹೊರತಾಗಿ, ಬೇರೆ ಎಲ್ಲಾ ವರ್ಗದ ವಿದ್ಯಾರ್ಥಿಗಳು ಸಂದರ್ಶನದ ಸಮಯದಲ್ಲೇ ಡಿ.ಡಿ.ಗಳನ್ನು ತೆಗೆದುಕೊಂಡು ಹಾಜರಾಗಬೇಕೆನ್ನುವ ನೀತಿಯಿಂದ ಸಹಸ್ರಾರು ಜನ ಅರ್ಹ ಬಡ ವಿದ್ಯಾರ್ಥಿಗಳು ಸಂದರ್ಶನಕ್ಕೆ ಹಾಜರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) :

ಅ) ಇಲ್ಲಾ.

1994 ರಿಂದ 2002–03ನೇ ಸಾಲಿನವರೆಗೆ ಸೀಟು ಹಂಚಿಕೆಯನ್ನು ಉನ್ನಿಕೃಷ್ಣನ್ ಪ್ರಕರಣದಲ್ಲಿ ಭಾರತದ ಸರ್ವೋಚ್ಚ ನ್ಯಾಯಾಲಯ ನೀಡಿದ ತೀರ್ಪಿನ ಅನ್ವಯ ಮಾಡಲಾಗುತ್ತಿತ್ತು. ದಿನಾಂಕ : 31–10–2002ರಲ್ಲಿ ಭಾರತದ ಸರ್ವೋಚ್ಚ

ನ್ಯಾಯಾಲಯ ಟಿ.ಎಂ.ಎ. ಪೈ ಪ್ರತಿಷ್ಠಾನ ವಿರುದ್ಧ ಕರ್ನಾಟಕ ಸರ್ಕಾರ ಹಾಗೂ ತದನಂತರ ಇಸ್ಲಾಮಿಕ್ ಅಕಾಡೆಮಿ ಹಾಗೂ ಪಿ.ಎ. ಇನಾಂದಾರ್ ಈ ಪ್ರಕರಣಗಳಲ್ಲಿ ನೀಡಿದ ತೀರ್ಪಿನ ಅನ್ವಯ ಖಾಸಗಿ ಅನುದಾನರಹಿತ ವೃತ್ತಿ ಶಿಕ್ಷಣ ಕಾಲೇಜುಗಳಲ್ಲಿಯ ಸೀಟುಗಳಲ್ಲಿ ಸರ್ಕಾರದ ಪಾಲು ಇರುವುದಿಲ್ಲ. ಆದಾಗ್ಯೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ಇತರೆ ಜನಾಂಗಗಳ ಅಭ್ಯರ್ಥಿಗಳಿಗೆ ಸಾಮಾಜಿಕ ನ್ಯಾಯ ಒದಗಿಸುವ ಉದ್ದೇಶದಿಂದ 2004–05, 2005–06 ಹಾಗೂ 2006–07 ಈ ಸಾಲುಗಳಲ್ಲಿ ಖಾಸಗಿ ವೃತ್ತಿಪರ ಕಾಲೇಜುಗಳ ಆಡಳಿತ ಮಂಡಳಿಗಳ ಜೊತೆ ಸರ್ಕಾರ, ಸೀಟು ಹಂಚಿಕೆ ಹಾಗೂ ಶುಲ್ಕ ನಿಗದಿ ಬಗ್ಗೆ ಮಾತುಕತೆ ನಡೆಸಿ ಒಂದು ಒಪ್ಪಂದಕ್ಕೆ ಬಂದು ಅದರಂತೆ ಖಾಸಗಿ ಕಾಲೇಜುಗಳಲ್ಲಿಯ ಸರ್ಕಾರದ ಪಾಲಿನ ಸೀಟುಗಳನ್ನು ರಿಯಾಯಿತಿ ಶುಲ್ಕ ಹಾಗೂ ಹೆಚ್ಚುವರಿ ಶುಲ್ಕ ವರ್ಗವಾಗಿ ವಿಂಗಡಿಸಿ, ಅದರಂತೆ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ರ್‍ಯಾಂಕ್‌ನಂತೆ ಹಂಚಿಕೆ ಮಾಡಲಾಗುತ್ತಿತ್ತು.

ಅದರಂತೆ ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿಯೂ ಅನುದಾನರಹಿತ ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಯೊಂದಿಗೆ ಸರ್ಕಾರ ಮಾತುಕತೆ ನಡೆಸಿ, ಒಂದು ಒಪ್ಪಂದಕ್ಕೆ ಬಂದಿದ್ದು, ಅದರಂತೆ ಖಾಸಗಿ ಅನುದಾನರಹಿತ ಮೆಡಿಕಲ್ ಕಾಲೇಜಿನಲ್ಲಿ ಶೇಕಡಾ 40ರಷ್ಟು, ಡೆಂಟಲ್ ಕಾಲೇಜುಗಳಲ್ಲಿ ಶೇಕಡಾ 35ರಷ್ಟು ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಶೇಕಡಾ 55ರಷ್ಟು ಸೀಟುಗಳು ಲಭ್ಯವಾಗಿದ್ದು, ಈ ಸಾಲಿನಿಂದ ಗ್ರಾಮೀಣ ಹಾಗೂ ಬಡ ವಿದ್ಯಾರ್ಥಿಗಳನ್ನು ಗಮನದಲ್ಲಿಟ್ಟುಕೊಂಡು ಈವರೆಗೆ ಇದ್ದ ಹೆಚ್ಚುವರಿ ಫೀಯನ್ನು ತೆಗೆದು ಹಾಕಿ ಲಭ್ಯವಾದ ಎಲ್ಲಾ ಸೀಟುಗಳನ್ನು ಈ ಕೆಳಕಂಡ ಏಕರೂಪ ರಿಯಾಯಿತಿ ಫೀ ವರ್ಗದಡಿ ಹಂಚಿಕೆ ಮಾಡಲಾಗಿರುತ್ತದೆ.

ಮೆಡಿಕಲ್	–	ರೂ.42,500/–
ಡೆಂಟಲ್	–	ರೂ.32,500/–
ಇಂಜಿನಿಯರಿಂಗ್	–	ರೂ.28,090/–

ರಾಜ್ಯ ಸರ್ಕಾರ ಅನುಸರಿಸಿದ ಈ ನೀತಿಯಿಂದಾಗಿ ರಾಜ್ಯದ ಬಡಮಕ್ಕಳಿಗೆ ವೈದ್ಯಕೀಯ ಮತ್ತು ಇಂಜಿನಿಯರಿಂಗ್ ಶಿಕ್ಷಣದ ಸೀಟುಗಳನ್ನು ಪಡೆಯುವಲ್ಲಿ ಯಾವುದೇ ವಂಚನೆಯಾಗಿರುವುದಿಲ್ಲ. ಬದಲಾಗಿ ಕಡಿಮೆ ವೆಚ್ಚದಲ್ಲಿ ಮೆಡಿಕಲ್/ಇಂಜಿನಿಯರಿಂಗ್ ಕೋರ್ಸುಗಳ ಶಿಕ್ಷಣ ಪಡೆಯಲು ಅನುಕೂಲವಾಗಿರುತ್ತದೆ.

ಆ) ಇಲ್ಲಾ.

ಆದರೆ ಪ್ರವೇಶ ಸುತ್ತಿನ ಸೀಟು ಆಯ್ಕೆ ಸುತ್ತಿನಲ್ಲಿ ಮೆಡಿಕಲ್/ಇಂಜಿನಿಯರಿಂಗ್ ರ್ಯಾಂಕ್ ನೀಡಲಾದ ಎಲ್ಲಾ ಅಭ್ಯರ್ಥಿಗಳು ಸೀಟು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದು, ಯಾವುದೇ ಅಭ್ಯರ್ಥಿ ಸಂದರ್ಶನದ ಸಮಯದಲ್ಲೇ ಡಿಡಿಯನ್ನು ತೆಗೆದುಕೊಂಡು ಹಾಜರಾಗಬೇಕೆನ್ನುವ ನೀತಿಯಿಂದ ಸಂದರ್ಶನಕ್ಕೆ ಹಾಜರಾಗದೇ ಇರುವುದು ಗಮನಕ್ಕೆ ಬಂದಿರುವುದಿಲ್ಲ. ಅಲ್ಲದೆ ಪ್ರಸ್ತುತ ಸಾಲಿನಲ್ಲಿ ಸಿಇಟಿ ಮೂಲಕ ಹಂಚಿಕೆ ಮಾಡಲಾದ ಎಲ್ಲಾ ಸೀಟುಗಳು ರಿಯಾಯಿತಿ ಫೀ ಆಗಿರುವುದರಿಂದ ಈ ಫೀ ಅನ್ನು ಭರಿಸಲು ಯಾವುದೇ ಅಭ್ಯರ್ಥಿಗೆ ತೊಂದರೆಯಾಗಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

578 (799) ಶ್ರೀ ರಮೇಶ್ ಕುಮಾರ್ ಕೆ.ಆರ್. (ಶ್ರೀನಿವಾಸಪುರ) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಶ್ರೀನಿವಾಸಪುರ ತಾಲ್ಲೂಕಿನಲ್ಲಿರುವ ಒಟ್ಟು ಕೆರೆಗಳು ಅಂದರೆ ಜಿಲ್ಲಾ ಪಂಚಾಯತ್ ನಿರ್ವಹಣೆಯ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಸಂಖ್ಯೆ ಎಷ್ಟು;

2) ಈವರೆವಿಗೂ ಎಷ್ಟು ಕೆರೆಗಳನ್ನು ಹೂಳೆತ್ತುವ ಕಾರ್ಯಕ್ರಮದಲ್ಲಿ ಸೇರಿಸಲಾಗಿದೇ;

3) ಈ ಪೈಕಿ ಎಷ್ಟು ಕೆರೆಗಳ ಪೋಷಕ ಕಾಲುವೆ (ಫೀಡರ್ ಚಾನಲ್), ತೂಬು ಕಾಲುವೆ, ಕೆರೆ ಕಟ್ಟೆ ದುರಸ್ತಿ ಇಂತಹ ಕೆಲಸಗಳಿಗಾಗಿ ಎಷ್ಟು ಹಣವನ್ನು ವ್ಯಯ ಮಾಡಲಾಗಿದೆ (ವಿವರಗಳನ್ನು ನೀಡುವುದು)?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

1) 259 ಕೆರೆಗಳು.

2) ಈವರೆವಿಗೂ 6 ಕೆರೆಗಳನ್ನು ಹೂಳೆತ್ತುವ ಕಾರ್ಯಕ್ರಮದಲ್ಲಿ ಸೇರಿಸಲಾಗಿದೆ.

3) ಈ ಕೆಳಕಂಡಂತೆ ವೆಚ್ಚದ ವಿವರ ನೀಡಲಾಗಿದೆ.